**ಕರ್ನಾಟಕ ಸರ್ಕಾರ**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 05–10–2021**

# ಪತ್ರಿಕಾ ಪ್ರಕಟಣೆ

**PRESS RELEASE**

**ಪೊಲೀಸ್ ಇಲಾಖೆಯಲ್ಲಿ ಮುಂಬಡ್ತಿ ಅವಧಿ ಸಡಿಲಿಕೆ ತೀರ್ಮಾನ**
**– ಸಚಿವ ಜೆ.ಸಿ. ಮಾಧುಸ್ವಾಮಿ**

ಬೆಂಗಳೂರು, ಅಕ್ಟೋಬರ್ 05(ಕರ್ನಾಟಕ ಸರ್ಕಾರ):

ಪೊಲೀಸ್ ಇಲಾಖೆಯಲ್ಲಿನ ವಿವಿಧ ಸೇವೆಗಳಿಗೆ ಈಗಿರುವ ಮುಂಬಡ್ತಿ ಅವಧಿಯನ್ನು 4 ವರ್ಷಗಳಿಗೆ ಇಳಿಸಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಸಣ್ಣ ನೀರಾವರಿ ಮತ್ತು ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವ ಜೆ.ಸಿ. ಮಾಧುಸ್ವಾಮಿ ಅವರು ತಿಳಿಸಿದರು.

ವಿಧಾನಸೌಧಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನಗಳ ಕುರಿತು ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಪೊಲೀಸ್ ಇಲಾಖೆಯಲ್ಲಿ ಈಗ ವಿವಿಧ ವೃಂದಗಳಲ್ಲಿ ಮುಂಬಡ್ತಿ ಅವಧಿ 8 ವರ್ಷಗಳಿಗೆ ಇದ್ದು, ಸಿಬ್ಬಂದಿಗಳು ಮುಂಬಡ್ತಿ ಪಡೆಯಲು ತುಂಬಾ ದಿನ ಕಾಯಬೇಕಗಿದ್ದು, ಅದನ್ನು 5 ವರ್ಷಗಳಿಗೆ ಇಳಿಸಲಾಗಿತ್ತು. ಈ 5 ವರ್ಷಗಳಿಗೆ ಇರುವ ಅವಧಿಯನ್ನು 4 ವರ್ಷಗಳಿಗೆ ಇಳಿಸಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಇದು ಪೊಲೀಸ್ ಸಿಬ್ಬಂದಿಯಿಂದ ಹಿಡಿದು ಎಸ್. ಐ ಹಂತದ ವರೆಗೂ ಅನ್ವಯಿಸಲಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ನವರಿಗೆ ನಬಾರ್ಡ್ ಮೂಲಕ ಮರುಹೊಂದಾಣಿಕೆ ಮಾಡುವುದಕ್ಕೆ 1550 ಕೋಟಿ ಮೊತ್ತವನ್ನು ಸರ್ಕಾರದ ವತಿಯಿಂದ ಖಾತ್ರಿಯನ್ನು ನೀಡಲಾಗಿದೆ. ಹಾನ್‌ಗಲ್ ವಿಧಾನಸಭಾ ಮತ್ತು ಸಿಂದಗಿ ವಿಧಾನಸಭಾ ಕ್ಷೇತ್ರಗಳಿಗೆ ಚುನಾವಣೆ ಘೋಷಿಸಿರುವುದರಿಂದ ಕೋಡ್ ಆಫ್ ಕಂಡಕ್ಟ್‌ಅನ್ನು ಸಚಿವ ಸಂಪುಟ ಸಭೆಯ ಗಮನಕ್ಕೆ ತರಲಾಗಿದೆ. ಲೋಕಾಯುಕ್ತ ಸಂಸ್ಥೆಯಲ್ಲಿ ಅರ್ಹ ಅಭ್ಯರ್ಥಿಗಳು ಇಲ್ಲದಿರುವುದರಿಂದ ಇಬ್ಬರು ಲೆಕ್ಕಪತ್ರಶಾಖೆಯಲ್ಲಿ ಲೆಕ್ಕಪರಿಶೋಧನಾ ಅಧಿಕಾರಿಯಾಗಿ ಕೆಲಸ ನಿರ್ವಹಿಸುತ್ತಿದ್ದ ಇಬ್ಬರು ಅಧಿಕಾರಿಗಳ ಸೇವಾ ಅವಧಿಯನ್ನು ಒಂದು ವರ್ಷ ಅವಧಿಗೆ ವಿಸ್ತರಿಸಲಾಗಿದೆ.

ಬೆಂಗಳೂರು ನಗರದಲ್ಲಿ 2020–21 ನೇ ಸಾಲಿನ ಪೋಲೀಸ್ ಆಧುನೀಕರಣ ಯೋಜನೆಯಲ್ಲಿ ಅವಶ್ಯವಿರುವ ಡಿಜಿಟಲ್ ಆಧುನೀಕರನಕ್ಕಾಗಿ ಹಾಗೂ ನಿರ್ವಹಣೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವತಿಯಿಂದ 14.65 ಕೋಟಿ ಮಂಜೂರು ಮಾಡಲಾಗಿದೆ. ಇದರಲ್ಲಿ ರೂ 9.00 ಕೋಟಿ ರಾಜ್ಯ ಸರ್ಕಾರದಿಂದ ಹಾಗೂ ಉಳಿದ ಮೊತ್ತವನ್ನು ಕೇಂದ್ರ ಸರ್ಕಾರದಿಂದ ಭರಿಸಲಾಗುವುದು.

ನನಿ ಮತ್ತು ಸಮುದ್ರದ ನೀರು ಅನವಶ್ಯಕವಾಗಿ ಪೋಲಾಗುವುದನ್ನು ತಡೆಯಲು. ಎಲ್ಲಿ ನದಿ ನೀರು ಮತ್ತು ಸಮುದ್ರದ ನೀರು ಒಟ್ಟಾಗಿ ಸೇರುವುದೋ ಅಲ್ಲಿ ಒಂದು ದೊಡ್ಡ ಕೆರೆ ನಿರ್ಮಾಣ ಮಾಡಲು ಸಂಬಂಧಿಸಿದಂತೆ, ಉತ್ತರ ಕನ್ನಡ ಜಿಲ್ಲೆಯ ಕಾರ್ ಲ್ಯಾಂಡ್ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ಈ ಯೋಜನೆಗೆ ಒಟ್ಟು ರೂ. 1500 ಕೋಟಿ ಆಯವ್ಯಯ ಇಟ್ಟುಕೊಂಡು ಪ್ರಸ್ತುತ ವರ್ಷಕ್ಕೆ ರೂ.300 ಕೋಟಿ ರೂಗಳ ಮಾಸ್ಟರ್ ಪ್ಲಾನ್‌ಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಉಡುಪಿ ಜಿಲ್ಲೆ ಖಾನಾಪುರ ತಾಲ್ಲೂಕು ತಳಗುಪ್ಪ ರಾಜ್ಯ ಹೆದ್ದಾರಿಯಲ್ಲಿ ದ್ವಿಪದ ರೋಡ್ ಮಾಡಲು 15 ಕೋಟಿ ಅನುದಾನ ಮಂಜೂರು ಮಾಡಲಾಗಿದೆ.

ವಿಂಡ್ ಪವರ್ ಉತ್ಪಾದನೆ ಮಾಡುವ ಸಂಬಂಧ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನಲ್ಲಿ 32 ಎಕರೆ ಜಮೀನನ್ನು, 30 ವರ್ಷಗಳ ಅವಧಿಗೆ ರೋಹನ್ ಸೋಲಾರ್ ಅವರಿಗೆ ಲೀಸ್‌ಗೆ ಕೊಡಲು ಸಚಿವ ಸಂಪುಟದಲ್ಲಿ ಅನುಮೋದನೆ ನೀಡಲಾಗಿದೆ.

ಸಂಧ್ಯಾ ಸುರಕ್ಷಾ ಯೋಜನೆಯಲ್ಲಿ ಅರವತ್ತು ವರ್ಷ ಮೇಲ್ಪಟ್ಟವರಿಗೆ ನೀಡಲಾಗುತ್ತಿರುವ (60 ವರ್ಷ ಮೇಲ್ಪಟ್ಟವರಿಗೆ ಹಾಗೂ 65 ವರ್ಷಗಳು ಮೇಲ್ಪಟ್ಟವರಿಗೆ ಎರಡು ಹಂತಗಳಲ್ಲಿ ಮಾಸಾಶನ ವಿತರಣೆ) ಮಾಸಾಶನವನ್ನು ರೂ. 600 ರಿಂದ ರೂ. 800 ಹಾಗೂ ರೂ. 1000 ದಿಂದ ರೂ. 1200ಕ್ಕೆ ಹೆಚ್ಚಿಸಲು ಅನುಮೋದನೆ ನೀಡಲಾಗಿದ್ದು, ಇದಕ್ಕೆ ಸುಮಾರು 207 ಕೋಟಿ ರೂ ಹೆಚ್ಚಾಗಿ ವೆಚ್ಚವಾಗುತ್ತದೆ. ಸುಮಾರು 34 ಲಕ್ಷ ಫಲಾನುಭವಿಗಳು ಈ ಯೋಜನೆಯ ಪ್ರಯೋಜನವನ್ನು ಪಡೆಯಲಿದ್ದಾರೆ.

ವೃತ್ತಿ ಶಿಕ್ಷಣ ಸಂಸ್ಥೆಯ ವಸತಿ ಶಾಲೆಗಳಲ್ಲಿ ಓದುವ ಮಕ್ಕಳಿಗೆ, ಸರ್ವಿಸ್ ಕಿಟ್ ನೀಡಲು (ಸೋಪು ಪೌಡರ್ ಮತ್ತು ತಲೆಗೆ ಬಳಸುವ ಎಣ್ಣೆ) ಮೈಸೂರು ಸೋಪ್ ಅಂಡ್ ಡಿಟರ್‌ಜಂಟ್ ಅವರು ಪೂರೈಸಲು 24.8 ಕೋಟಿ ಅನುದಾನ ನೀಡಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಹಾಗೂ ಸಭೆಯನ್ನು ಪ್ರೊರ್ವಬ್ ಮಾಡುವ ನಿರ್ಧಾರ ಪಡೆಯಲಾಗಿದೆ. ಮಂಡ್ಯ ಶುಗರ್ ಫ್ಯಾಕ್ಟರಿ ಖಾಸಗೀಕರಣಗೊಳಿಸಬೇಕೆ ಅಥವಾ ಸರ್ಕಾರವೆ ನಿರ್ವಹಿಸಬೇಕೆಂಬುದರ ಬಗ್ಗೆ ಮಾಡಬೇಕೆಂಬುದರ ಕುರಿತು ಕ್ಯಾಬಿನೇಟ್ ಸಬ್ ಕಮಿಟಿ ನೇಮಕ ಮಾಡಲಾಗಿದ್ದು, ಕ್ಯಾಬಿನೇಟ್ ಸಬ್ ಕಮಿಟಿ ವರದಿಯನ್ನು ಬೇಗ ನೀಡಲು ತಿಳಿಸಲಾಗಿದೆ ಎಂದು ತಿಳಿಸಿದರು.

## ಮೈಸೂರು ಮೃಗಾಲಯಕ್ಕೆ ಇನ್ಫೋಸಿಸ್ ಫೌಂಡೇಶನ್ ರೂ.20ಲಕ್ಷ ದೇಣಿಗೆ

ಬೆಂಗಳೂರು, ಅಕ್ಟೋಬರ್ 05, (ಕರ್ನಾಟಕ ವಾರ್ತೆ) :

ಬೆಂಗಳೂರು ಇನ್ಫೋಸಿಸ್ ಫೌಂಡೇಶನ್ ಅಧ್ಯಕ್ಷರಾದ ಶ್ರೀಮತಿ ಸುಧಾ ಮೂರ್ತಿ ಅವರು ಮೈಸೂರಿನ ಶ್ರೀ ಚಾಮರಾಜೇಂದ್ರ ಮೃಗಾಲಯದ ಪ್ರಾಣಿ-ಪಕ್ಷಿಗಳ ಪಾಲನೆ, ಪೋಷಣೆಗಾಗಿ, ಆರೋಗ್ಯ ಮತ್ತು ನಿರ್ವಹಣೆಗಾಗಿ ಉದಾತ್ತವಾಗಿ ರೂ.20 ಲಕ್ಷ ದೇಣಿಗೆ ನೀಡಿರುತ್ತಾರೆ. ಮೃಗಾಲಯದ ಬಗ್ಗೆ ಅವರಿಗಿರುವ ಅಭಿಮಾನ, ಕಳಕಳಿಗಾಗಿ ಮೈಸೂರು ಮೃಗಾಲಯವು ಬೆಂಗಳೂರು ಇನ್ಫೋಸಿಸ್ ಫೌಂಡೇಶನ್ ಅಧ್ಯಕ್ಷರಾದ ಶ್ರೀಮತಿ ಸುಧಾ ಮೂರ್ತಿ ಇವರಿಗೆ ಅಭಿನಂದನೆಗಳನ್ನು ಸಲ್ಲಿಸಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 05, (ಕರ್ನಾಟಕ ವಾರ್ತೆ) :

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ 2020-21 ನೇ ಸಾಲಿನಲ್ಲಿ ಕನ್ನಡದಲ್ಲಿ ಎಂ.ಫಿಲ್ ಮತ್ತು ಪಿ.ಹೆಚ್‌ಡಿ ಪದವಿ ಪಡೆದ ಮಹಾಪ್ರಬಂಧಗಳ ಹಸ್ತಪ್ರತಿ ಮುದ್ರಣಕ್ಕೆ ಸಹಾಯಧನ ನೀಡಲು ಸೇವಾಸಿಂಧು ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ನವೆಂಬರ್ 4, 2021 ಕೊನೆಯ ದಿನಾಂಕವಾಗಿದೆ. ಸೇವಾಸಿಂಧು ಹೊರತುಪಡಿಸಿ ನೇರವಾಗಿ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಸೃಜನೇತರ ಕನ್ನಡ ಗ್ರಂಥಗಳಿಗೆ ನಿಗಧಿತ ನಮೂನೆಯಲ್ಲಿ ನೇರವಾಗಿ ಇಲಾಖೆಗೆ ಅರ್ಜಿ ಸಲ್ಲಿಸಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## AISSEE ಸೈನಿಕ ಶಾಲೆಗಳ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 05, (ಕರ್ನಾಟಕ ವಾರ್ತೆ) :

ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿಯು (NTA) ಶಿಕ್ಷಣ ಸಚಿವಾಲಯ, ಭಾರತ ಸರ್ಕಾರದಡಿ ಸ್ಥಾಪನೆಯಾಗಿದ್ದು ಸ್ವಾತಂತ್ರ್ಯ / ಸ್ವಾಯತ್ತ, ಸ್ವಾವಲಂಬಿ ಹಾಗೂ ಸ್ವಯಂನಿರಂತರ ಸರ್ವಶ್ರೇಷ್ಠ ಪರೀಕ್ಷಾ ಸಂಸ್ಥೆಯಾಗಿದ್ದು, ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿಯು (NTA) 2022-23 ಶೈಕ್ಷಣಿಕ ವರ್ಷಕ್ಕಾಗಿ 6ನೇ ತರಗತಿ ಮತ್ತು 9ನೇ ತರಗತಿಗಳ ಪ್ರವೇಶಕ್ಕಾಗಿ ದೇಶದಾದ್ಯಂತ 33 ಸೈನಿಕ ಶಾಲೆಗಳಲ್ಲಿ **AISSEE- 2022** ಪ್ರವೇಶ ಪರೀಕ್ಷೆಗಾಗಿ ಅರ್ಜಿ ಆಹ್ವಾನಿಸಿದೆ.

ಅರ್ಜಿ ಸಲ್ಲಿಸಲು ಅಕ್ಟೋಬರ್ 26 ಕೊನೆಯ ದಿನಾಂಕವಾಗಿದೆ. ಪರೀಕ್ಷೆಯನ್ನು ಜನವರಿ 9, 2022 ಕ್ಕೆ ನಿಗಧಿಪಡಿಸಲಾಗಿದೆ. ಪರೀಕ್ಷೆಯ ಪ್ರಶ್ನೆ ಪತ್ರಿಕೆ ನಮೂನೆಯು ಬಹು ಆಯ್ಕೆ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ. 6ನೇ ತರಗತಿಗೆ ಅರ್ಹತೆ ಶೈಕ್ಷಣಿಕ ಪ್ರವೇಶಕ್ಕೆ ಅಭ್ಯರ್ಥಿಗಳು 31–03–2022 ರಂತೆ 10 ಮತ್ತು 12 ವರ್ಷಗಳ ಅಂದರೆ ಅಭ್ಯರ್ಥಿ 01 ಏಪ್ರಿಲ್ 2010 ಮತ್ತು 31 ಮಾರ್ಚ್ 2012 ರ ನಡುವೆ ಜನಿಸಿರಬೇಕು. ಪರೀಕ್ಷಾ ಶುಲ್ಕ ಎಸ್/ಎಸ್‌ಟಿ ಅಭ್ಯರ್ಥಿಗಳಿಗೆ ರೂ.400/–, ಸಾಮಾನ್ಯ/ ಒಬಿಸಿ–ಎನ್‌ಸಿಎಲ್/ ಡಿಇಎಫ್ ಅಭ್ಯರ್ಥಿಗಳಿಗೆ ರೂ.550/–, ನಿಗಧಿಪಡಿಸಲಾಗಿದೆ.

ಪರೀಕ್ಷೆಗೆ ಸಂಬಂಧಿಸಿದ ಯೋಜನೆ/ ಮಾಧ್ಯಮ/ ಪರೀಕ್ಷೆಯ ಪಠ್ಯಕ್ರಮ, ಸೈನಿಕ ಶಾಲೆಗಳ ಪಟ್ಟಿ ಹಾಘೂ ತಾತ್ಕಾಲಿಕ ಪ್ರವೇಶ, ಸೀಟುಗಳ ಮೀಸಲು, ಪರೀಕ್ಷಾ ನಗರಗಳು/ಕೇಂದ್ರಗಳು, ತೇರ್ಗಡೆ ಅವಶ್ಯಕತೆಗಳು, ಮುಖ್ಯ ದಿನಾಂಕಗಳಿಗಾಗಿ ವೆಬ್‌ಸೈಟ್ www.nta.ac.in ನ್ನು ಸಂಪರ್ಕಿಸಬಹುದಾಗಿದೆ.

**AISSEE** ಪರೀಕ್ಷೆಗಾಗಿ ಪ್ರವೇಶ ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ವೆಬ್‌ಸೈಟ್ https://aissee.nta.nic.in ನಲ್ಲಿ ಅರ್ಜಿ ಸಲ್ಲಿಸಬೇಕು. ಸೂಚನೆ: 2022–23ನೇ ಸಾಳಿನ ಶೈಕ್ಷಣಿಕ ವರ್ಷಕ್ಕೆ ಸೈನಿಕ ಶಾಲೆ ಕೊಡಗಿನಲ್ಲಿ 9ನೇ ತರಗತಿಗೆ ಸೀಟ್ ಖಾಲಿ ಇಲ್ಲದ ಕಾರಣ ಪ್ರವೇಶಕ್ಕೆ ಅವಕಾಶವಿರುವುದಿಲ್ಲ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಿವಿಧ ಉಪವಿಭಾಗಗಳಲ್ಲಿ ನೀರಿನ ಅದಾಲತ್

ಬೆಂಗಳೂರು, ಅಕ್ಟೋಬರ್ 05, (ಕರ್ನಾಟಕ ವಾರ್ತೆ) :

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಅಕ್ಟೋಬರ್ 7 ಗುರುವಾರದಂದು (ಪಶ್ಚಿಮ)–1, (ನೈರುತ್ಯ)–1, (ಆಗ್ನೇಯ–1), (ದಕ್ಷಿಣ–1),( ಪೂರ್ವ–2)–1, ( ಪೂರ್ವ–1)–1 , (ಉತ್ತರ ವಿಲೇಜ್)–2, (ಕೇಂದ್ರ–1) (ವಾಯುವ್ಯ–1) ಮತ್ತು (ವಾಯುವ್ಯ–4) ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ

ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ನೀರಿನ ಅದಾಲತ್‌ಅನ್ನು ಬೆಳಿಗ್ಗೆ 9.30 ರಿಂದ 11:00 ಗಂಟೆಯವರೆಗೆ ಹಮ್ಮಿಕೊಳ್ಳಲಾಗಿದೆ.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ. ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯವನ್ನು ಬಳಸಿಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಿದ್ಯಾರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ

ಬೆಂಗಳೂರು, ಅಕ್ಟೋಬರ್ 05, (ಕರ್ನಾಟಕ ವಾರ್ತೆ) :

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು 2020-21 ನೇ ಸಾಲಿನಲ್ಲಿ ಪ್ರವೇಶಾತಿ ಪಡೆದ ಪ್ರಥಮ ವರ್ಷದ ಸ್ನಾತಕ ಮತ್ತು ಸ್ನಾತಕೋತ್ತರ(B.A./B.Com/B.Lib.I.Sc./M.A./M.Com/M.Sc./M.BA/ M.Lib.I.Sc./B.Ed) ಮತ್ತು 2019-20 ನೇ ಸಾಲಿನ ದ್ವಿತೀಯ ವರ್ಷದ ಸ್ನಾತಕ(B.A./B.Com) ವಿದ್ಯಾರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮದ ತರಗತಿಗಳನ್ನು ಆನ್‌ಲೈನ್ ಮುಖಾಂತರ ಅಕ್ಟೋಬರ್ 8 ರಿಂದ ನಡೆಸಲಾಗುತ್ತಿದೆ.

ಕೌಶಲ್ಯಾಭಿವೃದ್ಧಿ ತರಬೇತಿಯ ಪಠ್ಯವಿಷಯ, ವೇಳಾಪಟ್ಟಿ ಮತ್ತು ತರಗತಿಗಳ ಆನ್‌ಲೈನ್ ವೆಬ್‌ಲಿಂಕ್ ಗಳನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಪಡೆದುಕೊಂಡ ವಿದ್ಯಾರ್ಥಿಗಳಿಗೆ E-Digital ಪ್ರಮಾಣಪತ್ರವನ್ನು ನೀಡಲಾಗುವುದು. ವಿದ್ಯಾರ್ಥಿಗಳು ತರಬೇತಿಯಲ್ಲಿ ಭಾಗವಹಿಸಿ ಸದುಪಯೋಗಪಡಿಸಿಕೊಳ್ಳಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಂಯೋಜನಾಧಿಕಾರಿ ಲೋಕೇಶ.ಜಿ.ಎಸ್. ಮೊ.ಸಂ. 9611434810 ರವರನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Mysuru Zoo is celebrating Wildlife Week from 2nd – 8th October

Bengaluru, october 05 (Karnataka Information):

Mysuru Zoo is celebrating Wildlife Week from 2nd – 8th October 2021. On this occasion various literary Competitions has been organised at Mysuru Zoo Amphitheatre for different age group students from 6th – 8th October 2021. Schedule for the event is as follows.

**6/10/2021**- Drawing/Painting Competition. 2:00 PM– 4:00 PM, **7/10/2021**- Essay Competition - Kannada & English 2:30 PM– 3:30 PM, **8/10/2021**- Quiz Competition 2:00PM – 4:00 PM, Please go through the link for enrolment - https://forms.gle/msfBGBVpF1mjcDXa9 Following COVID-19 protocol is Compulsory. For any queries contact 9686668099 / 0821-2440752.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಅಕ್ಟೋಬರ್ 05, (ಕರ್ನಾಟಕ ವಾರ್ತೆ) :

**ದಿನಾಂಕ: 5.10.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 49 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 96 | ತೃಪ್ತಿಕರ | CO |
| 3 | ಕವಿಕ, ಮೈಸೂರುರಸ್ತೆ | 76 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೇಗೌಡನಗರ | 38 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 42 | ಉತ್ತಮ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 79 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 65 | ತೃಪ್ತಿಕರ | CO |
| **(5.10.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | * | * | * |
| 9 | ಪೀಣ್ಯ | 67 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| ಉತ್ತಮ (0–50) | ಕನಿಷ್ಠ ಪರಿಣಾಮ |
| ತೃಪ್ತಿಕರ (51–100) | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| ಸಾಧಾರಣ (101–200) | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| ಕಳಪೆ (201–300) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| ಅತಿ ಕಳಪೆ (301–400) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| ತೀವ್ರ (>401) | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 5.10.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 49 | Good | $PM_{10}$ |
| 2 | Jayanagar 5th Block, Shalini ground | 96 | Satisfactory | CO |
| 3 | KAVIKA, Mysore Road | 76 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 38 | Good | $PM_{10}$ |
| 5 | HSR Layout, near Central Silkboard | 42 | Good | $PM_{10}$ |
| 6 | City Railway Station, Magestic, Bengaluru | 79 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 65 | Satisfactory | CO |
| **(5.10.2021 at 10.05 AM)** | | | | |
| 8 | BWSSB, Kadabesanahalli | * | * | * |
| 9 | Peenya | 67 | Satisfactory | $PM_{2.5}$ |
| 10 | BTM Layout | * | * | * |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older adults | Severe (>401) | Respiratory effects even on healthy people |